# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 62 ಗ್ರಾಪಂಅ 2019, ದಿ:15-02-2019.
3. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್-11:2018-19, ದಿನಾಂಕ:06.01.2020.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಪತ್ರದಲ್ಲಿ ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಆರೋಪದ ಮೇಲೆ ತನಿಖೆಯನ್ನು ನಡೆಸಲು ಕೋರಲಾಗಿರುತ್ತದೆ.

- 2015-16ನೇ ಸಾಲಿನಿಂದ ಇಲ್ಲಿಯವರೆಗೆ ಅಂದರೆ ದಿನಾಂಕ:14-12-2018 ರವರೆಗಿನ ಅವಧಿ ಯಲ್ಲಿ 14ನೇ ಹಣಕಾಸು ಯೋಜನೆಯಡಿ ಮತ್ತು ವರ್ಗ-1 ರಲ್ಲಿ ಒಟ್ಟು ರೂ.41,17,484/- ಗಳ ಬೃಹತ್ ಮೊತ್ತದ ಹಣ ದುರುಪಯೋಗಪಡಿಸಿಕೊಂಡಿರುವುದು ಹಾಗೂ ಕೇವಲ 9 ಸಾಮಾನ್ಯ ಸಭೆಗಳನ್ನು ಜರುಗಿಸಿರುವ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ತಮ್ಮ ವರದಿಯಲ್ಲಿ ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ

ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಸದರಿ ಅಧ್ಯಕ್ಷರು 14ನೇ ಹಣಕಾಸು ಯೋಜನೆ ಮತ್ತು ವರ್ಗ-1 ರಲ್ಲಿ ನಡೆದ ಬೃಹತ್ ಅವ್ಯವಹಾರದಲ್ಲಿ ಭಾಗಿಯಾಗಿರುವುದು ತನಿಖಾ ವರದಿಯಲ್ಲಿ ಕಂಡುಬರುತ್ತದೆ ಹಾಗೂ ವಿಚಾರಣೆ ಕಾಲದಲ್ಲಿ ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, 33 ಸಭೆಗಳನ್ನು ನಡೆಸಬೇಕಾದ ಅವಧಿಯಲ್ಲಿ ಕೇವಲ 12 ಸಭೆಗಳನ್ನು ನಡೆಸಿರುವುದು/ಕರೆದಿರುವುದು ಅಥವಾ ಹಾಜರಾತಿ ಪುಸ್ತಕದ ಪ್ರತಿಯನ್ನು ಸೃಷ್ಟಿಸಿರಬಹುದು ಎಂದು ಕಂಡುಬಂದಿದ್ದು, ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಲ್ಲಿ ನಿರಂತರವಾಗಿ ವಿಫಲರಾಗಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಅಧ್ಯಕ್ಷರ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರಡಿಯಲ್ಲಿ ರದ್ದುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಹಾಗೂ 48(5) ರಡಿಯಲ್ಲಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದುಹಾಕಲು ಹಾಗೂ ಸದರಿ ಅಧಿನಿಯಮದ ಪ್ರಕರಣ 157(2) ಮತ್ತು 246(8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಿಸಿದವರಿಂದ ವಸೂಲಿ ಮಾಡಲು ಹಾಗೂ ಸರ್ಕಾರದ ಅನುದಾನ ದುರ್ಬಳಕೆಯಲ್ಲಿ ಶಾಮೀಲಾಗಿರುವ ಸಂಬಂಧಿಸಿದ ಅಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 73 ಗ್ರಾಪಂಅ 2020 ಬೆಂಗಳೂರು, ದಿನಾಂಕ:05.03.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಹಾಗೂ 48(5) ರಡಿಯಲ್ಲಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದುಹಾಕಿ ಆದೇಶಿಸಿದೆ. ಹಾಗೂ ಸದರಿ ಅಧಿನಿಯಮದ ಪ್ರಕರಣ 157(2) ಮತ್ತು 246(8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಿಸಿದವರಿಂದ ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ಇವರಿಗೆ ಆದೇಶಿಸಿದೆ ಹಾಗೂ ಸರ್ಕಾರದ ಅನುದಾನ ದುರ್ಬಳಕೆಯಲ್ಲಿ ಶಾಮೀಲಾಗಿರುವ ಸಂಬಂಧಿಸಿದ ಅಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯ ವಿರುದ್ಧ ನಿಯಮಾನುಸಾರ

ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರಿಗೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 05/03/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

05/03/2020

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
6) ಶ್ರೀಮತಿ ರೇಖಾ ಶ್ರೀಶೈಲ ಕೆರಿಗೊಂಡ, ಅಂದಿನ ಅಧ್ಯಕ್ಷರು, ಮೊರಟಗಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ( **ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮುಖಾಂತರ**)

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.